ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER :

ದಿನಾಂಕ : DATE : 5/12/19

# ಕೋಳಿವಾಡ ಮನೆ ಮೇಲೆ ಐಟಿ ದಾಳಿ: ಕಾಂಗ್ರೆಸ್ ಖಂಡನೆ

5.12.19.

**ರಾಣೆಬೆನ್ನೂರು:** ಉಪಚುನಾವಣಾ ಮತದಾನಕ್ಕೆ ಒಂದು ದಿನ ಬಾಕಿ ಇರುವಾಗಲೇ ರಾಣೆಬೆನ್ನೂರು ಕಾಂಗ್ರೆಸ್ ಅಭ್ಯರ್ಥಿ ಕೆ.ಬಿ. ಕೋಳಿವಾಡ ಅವರ ನಿವಾಸದ ಮೇಲೆ ಮಂಗಳವಾರ ರಾತ್ರಿ, ಐಟಿ ದಾಳಿ ನಡೆದಿದೆ. ಇದು ವಿವಾದಕ್ಕೆ ಕಾರಣವಾಗಿದ್ದು, ಕಾಂಗ್ರೆಸ್ ನಾಯಕರು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



ಕೋಳಿವಾಡ ಅವರ ನಿವಾಸದಲ್ಲಿ ಐಟಿ ಅಧಿಕಾರಿಗಳು ತಡರಾತ್ರಿವರೆಗೆ ತಪಾಸಣೆ ನಡೆಸಿ, ಕೆಲ ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ ಎನ್ನಲಾಗಿದೆ. ಚುನಾವಣಾ ಹೊಸ್ತಿಲಲ್ಲಿ ಈ ರೀತಿ ಆದಾಯ ತೆರಿಗೆ ಅಧಿಕಾರಿಗಳು ಕಾಂಗ್ರೆಸ್ ಅಭ್ಯರ್ಥಿ ನಿವಾಸ ಮೇಲೆ ದಾಳಿ ನಡೆಸಿರುವುದು ದ್ವೇಷದ ರಾಜಕಾರಣ ಎನ್ನುವುದು ಸ್ಪಷ್ಟವಾಗುತ್ತದೆ. ರಾಣೆಬೆನ್ನೂರಿನಲ್ಲಿ ಕೋಳಿವಾಡ ಅವರು ಗೆಲ್ಲುವುದು ಖಚಿತವಾಗುತ್ತಿದ್ದಂತೆ, ಅವರ ಹೆಸರಿಗೆ ಮಸಿ ಬಳಿಯಲು ಕೇಂದ್ರ ಬಿಜೆಪಿಯು ಐಟಿ ಅಸ್ತ್ರ ಪ್ರಯೋಗಿಸಿದೆ ಎಂದು ಕಾಂಗ್ರೆಸ್ ವಾಗ್ದಾಳಿ ನಡೆಸಿದೆ.

ಕಾಂಗ್ರೆಸ್ ಆರೋಪಕ್ಕೆ ಪ್ರತಿಕ್ರಿಯಿಸಿರುವ ಬಿಜೆಪಿ ನಾಯಕರು, ಕೋಳಿವಾಡ ಅವರ ನಿವಾಸದ ಮೇಲೆ ನಡೆದಿರುವ ದಾಳಿಗೂ ನಮಗೂ ಸಂಬಂಧವಿಲ್ಲ. ಬಿಜೆಪಿ ನಾಯಕರ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ. ಈ ಬಗ್ಗೆ ಕ್ಷಮೆ ಕೇಳದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

**ದುರುದ್ದೇಶಪೂರಿತ ದಾಳಿ:** ಈ ದಾಳಿಗೆ ಸಂಬಂಧಿಸಿದಂತೆ ಕೋಳಿವಾಡ ಅವರ ಪುತ್ರ ಹಾಗೂ ಕೆಪಿಸಿಸಿ ಕಾರ್ಯದರ್ಶಿ ಪ್ರಕಾಶ್ ಕೋಳಿವಾಡ ಸುದ್ದಿಗೋಷ್ಠಿ ನಡೆಸಿ, ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕೋಳಿವಾಡ ಅವರ ನಿವಾಸದ ಮೇಲೆ ಮಧ್ಯರಾತ್ರಿ, ತೆರಿಗೆ ಇಲಾಖೆ ಅಧಿಕಾರಿಗಳು ಹಾಗೂ ಅಬಕಾರಿ ಅಧಿಕಾರಿಗಳು ದಾಳಿ ನಡೆಸಿರುವುದರ ಹಿಂದೆ ದುರುದ್ದೇಶ ಪೂರಿತವಾದ ರಾಜಕೀಯ ದ್ವೇಷವಿದೆ ಎಂದು ಆರೋಪಿಸಿದರು.

ಕೋಳಿವಾಡ ಅವರು ಜೀವಿತಾವಧಿಯ ಸುದೀರ್ಘ ರಾಜಕಾರಣದಲ್ಲಿ ಯಾವುದೇ ಕಪ್ಪು ಚುಕ್ಕೆಯಿಲ್ಲ. ಆದರೆ ಬಿಜೆಪಿ ಮುಖಂಡರು ತಮ್ಮ ಸೋಲಿನ ಹತಾಶೆಯಿಂದಾಗಿ ಐಟಿ ಮತ್ತು ಅಬಕಾರಿ ಅಧಿಕಾರಿಗಳ ಮೂಲಕ ದಾಳಿ ನಡೆಸಿದ್ದು ನೋವಾಗಿದೆ. ಕೋಳಿವಾಡರಿಗೆ ಹಾಗೂ ಕುಟುಂಬದವರಿಗೆ ಇದು ಮಾನಸಿಕ ನೋವನ್ನುಂಟು ಮಾಡಿದೆ. ಇದರಿಂದ ಕಾರ್ಯಕರ್ತರು ಸಹ ಆಕ್ರೋಶಗೊಂಡು ಮಧ್ಯರಾತ್ರಿಯೂ ಪ್ರತಿಭಟನೆ ನಡೆಸಿದ್ದಾರೆ. ಬಿಜೆಪಿಯ ಈ ಬೆದರಿಕೆಗೆ ಹೆದರುವವರು ನಾವಲ್ಲ ಎಂದರು.

## ಬಿಎಸ್‌ವೈ ಬಗ್ಗೆ ಹಗುರ ಮಾತು ಸಲ್ಲ

ಗೃಹ ಸಚಿವ ಬೊಮ್ಮಾಯಿ, ಸಿಎಂ ಯಡಿಯೂರಪ್ಪನವರ ಕುರಿತು ಹಗುರವಾಗಿ ಮಾತನಾಡಬಾರದು. ಕಾಂಗ್ರೆಸ್ ಅಭ್ಯರ್ಥಿಗೆ ಸೋಲಿನ ಭಯ ಉಂಟಾಗಿ ಹತಾಶಗೊಂಡು ಮಾತನಾಡಿದ್ದಾರೆ. ಕೋಳಿವಾಡ ಅವರು ಎಂತಹವರು? ಹೇಗಿದ್ದಾರೆ ಎಂಬುದರ ಬಗ್ಗೆ ತಾಲೂಕಿನ ಜನರೇ ಚುನಾವಣೆಯಲ್ಲಿ ಉತ್ತರಿಸಲಿದ್ದಾರೆ. ಇಂತಹ ಬಿಜೆಪಿ ನಾಯಕರ ವಿರುದ್ಧ ಆಧಾರ ರಹಿತ ಆರೋಪಗಳನ್ನು ಮಾಡಿದರೆ ಬಿಜೆಪಿಯಿಂದ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಸುದ್ದಿಗೋಷ್ಠಿಯಲ್ಲಿ ರಾಣೆಬೆನ್ನೂರು ಬಿಜೆಪಿ ಅಭ್ಯರ್ಥಿ ಅರುಣ್ ಕುಮಾರ್ ಹೇಳಿದ್ದಾರೆ.

## ರಾಜಕೀಯ ಪ್ರೇರಿತ: ಕೆಪಿಸಿಸಿ

ಉಪಚುನಾವಣೆಯಲ್ಲಿ ಸೋಲುವ ಭೀತಿಯಿಂದಾಗಿ ವಿಚಲಿತವಾಗಿರುವ ಬಿಜೆಪಿ, ಕಾಂಗ್ರೆಸ್ ಅಭ್ಯರ್ಥಿ ಮನೆ ಮೇಲೆ ಐಟಿ ದಾಳಿ ಮಾಡಿಸಿದೆ ಎಂದು ಕೆಪಿಸಿಸಿ ಆಕ್ರೋಶ ವ್ಯಕ್ತಪಡಿಸಿದೆ. ಈ ಬಗ್ಗೆ ಟ್ವಿಟರ್‌ನಲ್ಲಿ ಪ್ರತಿಕ್ರಿಯಿಸಿದ ಕರ್ನಾಟಕ ಕಾಂಗ್ರೆಸ್ ಘಟಕ, ಬಿಜೆಪಿಯ ಮುಂಚೂಣಿ ಘಟಕಗಳು ಕೆಲಸ ಮಾಡುವ ರೀತಿ ಆದಾಯ ತೆರಿಗೆ ಇಲಾಖೆ ಕೆಲಸ ಮಾಡುತ್ತಿದೆ. ಚುನಾವಣೆ ಸಮಯದಲ್ಲಿ ಕೇವಲ ಕಾಂಗ್ರೆಸ್ ನಾಯಕರ ಮನೆ ಮೇಲಷ್ಟೇ ದಾಳಿ ಮಾಡುತ್ತಿದೆ. ಬಿಜೆಪಿಯ ಯಾವ ನಾಯಕರ ಮನೆ ಮೇಲೂ ದಾಳಿ ಮಾಡುವುದೇ ಇಲ್ಲ. ಉಪಚುನಾವಣೆಯಲ್ಲಿ ಜನರು ಬಿಜೆಪಿಗೆ ವಿರುದ್ಧವಾಗಿ ಮತ ಚಲಾಯಿಸಲಿದ್ದಾರೆ. ಅನರ್ಹರು ಸೋಲುವುದು ಖಚಿತ. ಕರ್ನಾಟಕ ಗೆಲ್ಲಲಿದೆ. ಬಿಜೆಪಿ ಸರಕಾರ ಬೀಳಲಿದೆ. ಈ ಸತ್ಯ ಮನವರಿಕೆಯಾಗಿದ್ದರಿಂದ ವಿಚಲಿತವಾಗಿರುವ ಬಿಜೆಪಿ, ಐಟಿಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದೆ.